ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

"ವಾರ್ತಾ ಭವನ", ಡಿ.ಸಿ.ಕಂಪೌಂಡ, ಧಾರವಾಡ–580001. ( 0836–2447469)
ಇ–ಮೇಲ್:– varthabhavandwd74@gmail.com

ದಿನಾಂಕ: 29–12–2018

ವಾವಿಸಂ:760

## ಅ.ಭಾ.84 ನೇ ಕನ್ನಡ ಸಾಹಿತ್ಯ ಸಮ್ಮೇಳನ
## 20 ಸಾವಿರಕ್ಕೂ ಅಧಿಕ ಜನರಿಗೆ ವಸತಿ, ಸಾರಿಗೆ ಸೌಕರ್ಯ – ಅಮೃತ ದೇಸಾಯಿ

**ಧಾರವಾಡ (ಕರ್ನಾಟಕ ವಾರ್ತೆ) ಡಿ.29:** 84ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸುವ ಗಣ್ಯರಿಗೆ ಅತಿಥಿಗಳಿಗೆ ಹಾಗೂ ನೋಂದಾಯಿತ ಸದಸ್ಯರಿಗೆ ಸೂಕ್ತ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ವಸತಿ ಮತ್ತು ಸಾರಿಗೆ ಸಮಿತಿ ಅಧ್ಯಕ್ಷ ಹಾಗೂ ಶಾಸಕ ಅಮೃತ ದೇಸಾಯಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ವಿವಿಧ ಜಿಲ್ಲೆಗಳಿಂದ 618 ಅತಿಥಿ ಗಣ್ಯರು, 992 ವಿಶೇಷ ಆಹ್ವಾನಿತರು, 338 ಕಾರ್ಯಕಾರಿ ಸಮಿತಿ ಸದಸ್ಯರು, 15175 ನೊಂದಾಯಿತ ಪ್ರತಿನಿಧಿಗಳು 42 ಸಾಹಿತ್ಯ ಪರಿಷತ್ತಿನ ಕೇಂದ್ರ ಸಮಿತಿ ಪದಾಧಿಕಾರಿಗಳು, ಸಿಬ್ಬಂದಿ ಸೇರಿದಂತೆ 17365 ಸಂಖ್ಯೆಯಲ್ಲಿ ಆಗಮಿಸಲಿದ್ದಾರೆ ಎಂದರು.

ಧಾರವಾಡದ 35 ಹೊಟೇಲ್ ಹಾಗೂ ಹುಬ್ಬಳ್ಳಿಯ 45 ಹೊಟೇಲ್ ಸೇರಿದಂತೆ ಒಟ್ಟು 80 ಹೊಟೇಲ್ ಗಳಲ್ಲಿ ವಸತಿ ಸೌಲಭ್ಯ ಕಲ್ಪಿಸಲಾಗಿದೆ. ಹು–ಧಾ ಅವಳಿ ನಗರದಲ್ಲಿರುವ 87 ಹಾಸ್ಟೇಲ್, 35 ಕಲ್ಯಾಣ ಮಂಟಪ, ಧಾರವಾಡದ 18 ಶಾಲೆಗಳು ಹಾಗೂ 14 ಪೇಯಿಂಗ್ ಗೆಸ್ಟ್ ಹೌಸ್ ಗಳಲ್ಲಿ ಸೇರಿ ಒಟ್ಟು 154 ವಿವಿಧ ಸ್ಥಳಗಳಲ್ಲಿ 13175 ಪ್ರತಿನಿಧಿಗಳಿಗೆ ವ್ಯವಸ್ಥೆ ಮಾಡಲಾಗಿದೆ ಎಂದರು.

ವಿವಿಧ ಜಿಲ್ಲೆಗಳ ಸಾಹಿತ್ಯ ಪರಿಷತ್ತಿನ ತಾಲೂಕಾ ವಿಶೇಷ ಆಹ್ವಾನಿತರಿಗೆ ಒಟ್ಟು 11 ಸರ್ಕಾರಿ, ಖಾಸಗಿ,ತರಬೇತಿ ವಸತಿ ಗೃಹಗಳು ಹಾಗೂ ಹೊಟೇಲ್ ಗಳಲ್ಲಿ ವಸತಿ ವ್ಯವಸ್ಥೆ ಮಾಡಲಾಗಿದೆ. ಪ್ರತಿಯೊಂದು ವಸತಿ ನಿಲಯಗಳಿಗೆ ಇಬ್ಬರು ನೋಡಲ್ ಅಧಿಕಾರಿಗಳು ಹಾಗೂ ಸ್ವಯಂ ಸೇವಕರನ್ನು ನಿಯೋಜನೆ ಮಾಡಲಾಗುವುದು. ಕಲ್ಯಾಣ ಮಂಟಪಗಳಲ್ಲಿ ವಾಸ್ತವ್ಯ ಹೊಂದುವವರಿಗೆ ಜಿಲ್ಲಾಡಳಿತದಿಂದ ಎಲ್ಲ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಎಂದರು.

ಎಲ್ಲ ಅತಿಥಿಗಳಿಗೆ ಆರೋಗ್ಯ ಸೇವೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ. ಮೇಲ್ವಿಚಾರಣಾಧಿಕಾರಿಗಳನ್ನಾಗಿ ಸಂಬಂಧಿಸಿದ ಇಲಾಖೆ ಮುಖ್ಯಸ್ಥರನ್ನು, ತಹಶಿಲ್ದಾರರು ಹಾಗೂ ಪಾಲಿಕೆ ಅಧಿಕಾರಿಗಳನ್ನು ನೇಮಿಸಲಾಗಿದೆ. ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವ ಗಣ್ಯ ಮತ್ತು ಅತಿ ಗಣ್ಯ ಅತಿಥಿಗಳಿಗಾಗಿ ಪ್ರತ್ಯೇಕ ವಾಹನ ವ್ಯವಸ್ಥೆ ಮಾಡಲಾಗಿದೆ. ಸಾರಿಗೆ ವ್ಯವಸ್ಥೆಗಾಗಿ ಧಾರವಾಡ ಹುಬ್ಬಳ್ಳಿಯಲ್ಲಿರುವ ಶಿಕ್ಷಣ ಸಂಸ್ಥೆಗಳು, ಬೇಂದ್ರೆ ನಗರ ಸಾರಿಗೆ, ವಿ ಆರ್ ಎಲ್ ಸಂಸ್ಥೆಗಳೂ ಸಹಕಾರ ನೀಡಿವೆ. ಒಟ್ಟು 250 ಬಸ್ ಹಾಗೂ ಮಿನಿ ಬಸ್ ಗಳನ್ನು ಪಡೆಯಲಾಗಿದೆ.

ಅತಿಥಿಗಳು ತಂಗುವ ಹೊಟೇಲ್ ಗಳು ಹಾಸ್ಟೇಲ್ ಗಳು ಮತ್ತು ಕಲ್ಯಾಣ ಮಂಟಪಗಳಿಗೆ ನಿಗದಿತ ಮಾರ್ಗವಾಗಿ ಗುರುತಿಸಿ ನಿರಂತರ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ಸಮ್ಮೇಳನಕ್ಕೆ ಅನುಕೂಲವಾಗುವಂತೆ ಸಾರಿಗೆ ಸಂಸ್ಥೆಯಿಂದ 50 ಬಸ್ ಪಡೆಯಲಾಗುವುದು ನಗರದಲ್ಲಿ ನಿರಂತರ ಸಂಚರಿಸುವಂತೆ ವ್ಯವಸ್ಥೆ

ಮಾಡಲಾಗಿದೆ. ಅವಶ್ಯವಿದ್ದಲ್ಲಿ ವಾಹನಗಳನ್ನು ಬಾಡಿಗೆ ಆಧಾರದ ಮೇಲೆ ಪಡೆಯಲು ವ್ಯವಸ್ಥೆ ಮಾಡಲಾಗಿದೆ ಎಂದರು.

ಧಾರವಾಡದ ಗಾಂಧೀ ನಗರ,ವಿದ್ಯಾಗಿರಿ, ರೇಲ್ವೆ ಸ್ಟೇಷನ್,ಹೊಸ ಬಸ್ ನಿಲ್ದಾಣ, ಶ್ರೀನಗರ ವೃತ್ತ,ಕಲ್ಯಾಣ ನಗರ ಪ್ರದೇಶಗಳಿಂದ ಉಚಿತ ಸಾರಿಗೆ ಸೇವೆಗಳನ್ನು ಒದಗಿಸಲಾಗುವುದು ಎಂದರು.

ಅಪರ ಜಿಲ್ಲಾಧಿಕಾರಿ ಇಬ್ರಾಹಿಂ ಮೈಗೂರ, ಉಪವಿಭಾಗಾಧಿಕಾರಿ ಮಹ್ಮದ್ ಜುಬೇರ್, ಮಹಾನಗರಪಾಲಿಕೆ ಉಪ ಆಯುಕ್ತ ಅಜೀಜ್ ದೇಸಾಯಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ವಿನಾಯಕ ಪಾಲನಕರ್, ತಹಸೀಲ್ದಾರ ಪ್ರಕಾಶ ಕುದರಿ ಮತ್ತಿತರರು ಇದ್ದರು.

*********